**ಕರ್ನಾಟಕ ಸರ್ಕಾರದ ನಡವಳಿಗಳು**

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ವಿಷಯ: ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ ಸಹಿತ ಬ್ಯಾರೇಜ್‌ನ್ನು ಜಲ ಸಂಪನ್ಮೂಲ ಇಲಾಖೆ ವರ್ಗಾಯಿಸುವ ಕುರಿತು.

******

**ಓದಲಾಗಿದೆ:**

ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರ, ಇವರ ಪತ್ರಸಂಖ್ಯೆ:ಮು.ಇಂ/ಸನೀ(ಉ)ವಲಯ/ಬಿಜೆಪಿ/ಎಇ-1/2010-11/1635 ದಿನಾಂಕ: 25.03.2011.

**ಪ್ರಸ್ತಾವನೆ:**

ಬೆಳಗಾವಿ ಜಲ್ಲೆ ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ ಹಾಗೂ ಯಡೂರ ಗ್ರಾಮಗಳ ನಡುವೆ ಕೃಷ್ಣಾ ನದಿಗೆ ಅಡ್ಡಲಾಗಿ, ಕೃಷ್ಣಾ, ಧೂದಗಂಗಾ ಹಾಗೂ ವೇದಗಂಗಾ ನದಿಗಳ ಸಂಗಮ ಸ್ಥಳದಲ್ಲಿ ಸೇತುವೆ ಸಹಿತ ಬ್ಯಾರೇಜ್‌ನ್ನು 1981-82 ಸಾಲಿನಲ್ಲಿ ನಿರ್ಮಿಸಲಾಗಿರುತ್ತದೆ. ಸದರಿ ಯೋಜನೆಯ ಅಚ್ಚುಕಟ್ಟ ಪ್ರದೇಶವು 2226 ಹೆಕ್ಟೇರ್ ಆಗಿದ್ದು, ಸಣ್ಣ ನೀರಾವರಿ ಯೋಜನೆಯ ವ್ಯಾಪ್ತಿಯನ್ನು ಮೀರಿರುತ್ತದೆ. ಪ್ರಸ್ತುತ ಈ ಸೇತುವೆ ಸಹಿತ ಬ್ಯಾರೇಜ್ ಶಿಥಿಲಾವಸ್ಥೆಯಲ್ಲಿದ್ದು ಅದರ ದುರಸ್ತಿ ಅಥವಾ ಪುನರ್ ನಿರ್ಮಾಣ ಕಾರ್ಯವನ್ನು ಕೈಗೊಳ್ಳುವುದು ಅವಶ್ಯವಿರುತ್ತದೆ. ಸದರಿ ವಿಷಯವು ಜಲ ಸಂಪನ್ಮೂಲ ಇಲಾಖೆಯ ಪರಿಶೀಲನೆಯಲ್ಲಿದ್ದು ಸೂಕ್ತ ಕ್ರಮ ಕೈಗೊಳ್ಳುವ ಸಲುವಾಗಿ ಅಸ್ತಿತ್ವದಲ್ಲಿರುವ ಯೋಜನೆಯನ್ನು ಜಲ ಸಂಪನ್ಮೂಲ ಇಲಾಖೆಗೆ ವರ್ಗಾಯಿಸಲು ಪರಿಗಣಿಸಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸನೀಇ 18 ಅಪಿಬಂ (ತಾಂತ್ರಿಕ) 2011,**
**ಬೆಂಗಳೂರು, ದಿನಾಂಕ 01 ನೇ ಏಪ್ರಿಲ್ 2011.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ಕಲ್ಲೋಳ ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ ಸಹಿತ ಬ್ಯಾರೇಜ್‌ನ್ನು ಜಲ ಸಂಪನ್ಮೂಲ ಇಲಾಖೆ ವಹಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Rudraemurthy
1/4/201

(ರುದ್ರಮೂರ್ತಿ)
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು ಕರ್ನಾಟಕ ಬೆಂಗಳೂರು.
2) ಮಹಾಲೇಖಪಾಲರು, ಲೆಕ್ಕಪತ್ರ-1 ಮತ್ತು ಲೆಕ್ಕಪತ್ರ-2, ಕರ್ನಾಟಕ, ಬೆಂಗಳೂರು.
3) ಮಹಾಲೇಖಪಾಲರು, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2, ಕರ್ನಾಟಕ, ಬೆಂಗಳೂರು.
4) ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.